8. ಪ್ರಕಟಣೆ : ವಿಷಯ: ಕರ್ನಾಟಕ ಕಾನೂನುಗಳ ಕ್ರೋಢೀಕೃತ ಸಂಪುಟಗಳ ಪರಿಷ್ಕೃತ ಆವೃತ್ತಿಯ ಬಿಡುಗಡೆ ಬಗ್ಗೆ.

ದಿನಾಂಕ: 11.07.2014 ರಂದು ಬೆಳಿಗ್ಗೆ 09.00 ಗಂಟೆಗೆ ವಿಧಾನ ಸೌಧದ 3ನೇ ಮಹಡಿಯಲ್ಲಿರುವ ಸಮ್ಮೇಳನ ಸಭಾಂಗಣದಲ್ಲಿ ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನಾ ಇಲಾಖೆಯ ವತಿಯಿಂದ ಕರ್ನಾಟಕ ಕಾನೂನುಗಳ ಕ್ರೋಢೀಕೃತ ಸಂಪುಟಗಳ ಪರಿಷ್ಕೃತ ಆವೃತ್ತಿಯನ್ನು ಮಾನ್ಯ ಮುಖ್ಯಮಂತ್ರಿಗಳು ಲೋಕಾರ್ಪಣೆ ಮಾಡುವವರು ಇದ್ದಾರೆ. ಆದುದರಿಂದ ಮಾನ್ಯ ಸದಸ್ಯರುಗಳು ಸದರಿ ಸಮಾರಂಭದಲ್ಲಿ ಉಪಸ್ಥಿತರಿರುವಂತೆ ಈ ಮೂಲಕ ಕೋರಲಾಗಿದೆ.

ಅಧ್ಯಕ್ಷರು: ಈಗ ಸದನವನ್ನು ನಾಳೆ ಬೆಳಗ್ಗೆ: 10.00 ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು 7 ಗಂಟೆ 52 ನಿಮಿಷಕ್ಕೆ ಮುಕ್ತಾಯಗೊಂಡು ಪುನಃ ದಿನಾಂಕ: 11.07.2014 ರಂದು ಬೆಳಿಗ್ಗೆ: 10.00 ಗಂಟೆಗೆ ಸೇರುವಂತೆ ನಿಶ್ಚಯಿಸಿತು)

ಭಾಗ–2

ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು.

ಅನುಬಂಧ–1

ರಾಯಭಾಗ ತಾಲ್ಲೂಕಿನಲ್ಲಿ ಖಾಲಿ ಇರುವ ಹುದ್ದೆಗಳು

1632 (1572); ಶ್ರೀ ಐಹೊಳೆ ಡಿ. ಮಹಾಲಿಂಗಪ್ಪ (ರಾಯಭಾಗ)

ಅ) ಬೆಳಗಾವಿ ಜಿಲ್ಲೆ ರಾಯಭಾಗ ತಾಲ್ಲೂಕಿನಲ್ಲಿ ಆರೋಗ್ಯ ಕೇಂದ್ರಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳು ಎಷ್ಟು (ವೃಂದವಾರು ವಿವರ ನೀಡುವುದು)?